ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ಇಲಾಖೆ**

**DTE-ADMI0ACM2/43/2024**

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:28-08-2024.

**- :: ಸು ತ್ತೋ ಲೆ ::-**

**ವಿಷಯ:** **2024-25ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳ ಪ್ರವೇಶ, ಮರುಪ್ರವೇಶ ಹಾಗೂ ವರ್ಗಾವಣೆ ಶುಲ್ಕ ಪಾವತಿಸಲು ಕೊನೆಯ ಅವಕಾಶ ನೀಡಿ ಅವಧಿ ವಿಸ್ತರಿಸಿರುವ ಬಗ್ಗೆ.**

**ಉಲ್ಲೇಖ:** 1. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 18.06.2024, 09.08.2024.
2. ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿಗಳು.

*********

2024-25ನೇ ಸಾಲಿನಲ್ಲಿ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಅಂತಿಮ ದಿನಾಂಕ:23-08-2024 ಎಂದು ಉಲ್ಲೇಖ(1)ರ ದಿ:09-08.2024ರ ಸುತ್ತೋಲೆಯಲ್ಲಿ ನಿಗಧಿಪಡಿಸಲಾಗಿತ್ತು. ಮುಂದುವರೆದಂತೆ, Makeup ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಮೇಲ್ಕಂಡಂತೆ ಅಂತಿಮ ದಿನಾಂಕದೊಳಗೆ ತಮ್ಮ ವೈಯಕ್ತಿಕ ಕಾರಣಗಳಿಂದಾಗಿ ಪ್ರವೇಶ ಶುಲ್ಕ ಹಾಗೂ ವರ್ಗಾವಣೆ ಶುಲ್ಕ ಪಾವತಿಸದೇ ಇದ್ದು, ಪ್ರವೇಶ ಅನುಮತಿ ಕೋರಿರುವುದನ್ನು ಸಂಬಂದಪಟ್ಟ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳು ಮನವಿ ಸಲ್ಲಿಸಿರುತ್ತಾರೆ. ಪರಿಶೀಲಿಸಲಾಗಿ, 2024-25ನೇ ಸಾಲಿನ Makeup ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೂ ಅನ್ವಯವಾಗುವಂತೆ ಒಟ್ಟಾರೆಯಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ, ಮರುಪ್ರವೇಶ ಮತ್ತು ಪಾಲಿಟೆಕ್ನಿಕ್ ವರ್ಗಾವಣೆ ಸಂಬಂಧ ಅಂತಿಮ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಅನುಮತಿ ನೀಡಲಾಗಿದೆ.

1. **3 & 5ನೇ ಸೆಮಿಸ್ಟರ್ ತರಗತಿಗೆ ಪ್ರವೇಶ ಹಾಗೂ ಮರುಪ್ರವೇಶ ಪಡೆಯಲು ದಿನಾಂಕ:06.09.2024 ರ ಒಳಗೆ ರೂ. 1000/- ದಂಡ ಶುಲ್ಕದೊಂದಿಗೆ ಪ್ರವೇಶ ನೀಡುವುದು.**

2. **ವಿದ್ಯಾರ್ಥಿಗಳು ವರ್ಗಾವಣೆಗೆ ಸಂಬಂಧಿಸಿದಂತೆ, ದಿನಾಂಕ:04.09.2024 ರ ಒಳಗೆ ವರ್ಗಾವಣೆ ಶುಲ್ಕ ಪಾವತಿಸಿರತಕ್ಕದ್ದು.**

3. **ದಿನಾಂಕ:06.09.2024 ರ ಒಳಗೆ ಅನುಮೋದನೆಗಾಗಿ ವರ್ಗಾವಣೆಗೆ ಸಂಬಂಧಪಟ್ಟ ಅರ್ಜಿಗಳನ್ನು ಆಯುಕ್ತಾಲಯಕ್ಕೆ ಸಲ್ಲಿಸತಕ್ಕದ್ದು.**

4. **ಮರುಮೌಲ್ಯಮಾಪನದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ತರಗತಿಗೆ ಯಾವುದೇ ದಂಡಶುಲ್ಕವನ್ನು ಪಾವತಿಸದೆ ಪ್ರವೇಶ ನೀಡುವುದು.**

ಮೇಲ್ಕಂಡ ಅವಧಿ ವಿಸ್ತರಣೆ ಹೊರತುಪಡಿಸಿ ಉಲ್ಲೇಖ(1) ರಲ್ಲಿನ ಸುತ್ತೋಲೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ. ತಾಂತ್ರಿಕ ಪರೀಕ್ಷಾ ಮಂಡಳಿ ನಿಯಮಗಳನ್ವಯ ಹಾಜರಾತಿಯನ್ನು ಪೂರೈಸುವ

ಷರತ್ತಿಗೊಳಪಟ್ಟು ಮೇಲ್ಕಂಡ ಅವಧಿಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರವೇಶ ನೀಡತಕ್ಕದ್ದು. *ಪ್ರವೇಶ ಅವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ, ಆದುದರಿಂದ ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.*

*"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"*

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು**

**ಇವರಿಗೆ,**

*ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರುಗಳಿಗೆ - ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ.*

**ಪ್ರತಿ ಇವರಿಗೆ ಮಾಹಿತಿಗಾಗಿ:-**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
4. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
5. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
6. ಕಛೇರಿ ಪ್ರತಿ.